158ನೇ ಮು W SL.NO:-25 ದಿ:-11-03-26



ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ರಮೇಶ್ ಬಾಬು ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸುವ ವಿಷಯಕ್ಕೆ ಉತ್ತರ

ಸೂಚನೆ

"ನಮ್ಮ ದೇಶದ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಅನೇಕ ಸೇನಾನಿಗಳು ತಮ್ಮ ತನು ಮನ ಧನ ಅರ್ಪಣೆ ಮಾಡಿ, ಹೋರಾಟ ಮಾಡಿರುತ್ತಾರೆ. ಅವರ ಹೋರಾಟದ ಫಲ ನಾವು ಬ್ರಿಟಿಷರಿಂದ ಮುಕ್ತವಾಗಿ ಪ್ರಜಾಪ್ರಭುತ್ವದ ಮೂಲಕ ಸ್ವಾತಂತ್ರ್ಯವನ್ನು ಅನುಭವಿಸುತ್ತಿದ್ದೇವೆ. ಸ್ವಾತಂತ್ರ್ಯ ಹೋರಾಟದ ಸಂದರ್ಭದಲ್ಲಿ ಎಲ್ಲವನ್ನು ತ್ಯಾಗ ಮಾಡಿ, ದೇಶವು ಸ್ವಾತಂತ್ರ್ಯ ಗಳಿಸಬೇಕೆಂಬ ಉದ್ದೇಶದಿಂದ ಸಾರ್ವಜನಿಕ ಹೋರಾಟದಲ್ಲಿ ತೊಡಗಿಸಿಕೊಂಡ ಲಕ್ಷಾಂತರ ಮಂದಿಗೆ ರಾಜ್ಯ ಸರ್ಕಾರಗಳು ಮತ್ತು ಕೇಂದ್ರ ಸರ್ಕಾರ ಅನೇಕ ರೀತಿಯ ಗೌರವಗಳನ್ನು ಸಮರ್ಪಣೆ ಮಾಡಿಕೊಂಡು ಬಂದಿರುತ್ತದೆ. ಕರ್ನಾಟಕದಲ್ಲಿ ಸ್ವಾತಂತ್ರ್ಯ ಹೋರಾಟದಲ್ಲಿ ಭಾಗಿಯಾದಂತಹ ಸ್ವಾತಂತ್ರ್ಯ ಯೋಧರಿಗೆ ಮತ್ತು ಸ್ವಾತಂತ್ರ್ಯ ಯೋಧರ ಅವಲಂಭಿತರಿಗೆ ಮಾಸಾಶನ ನೀಡುವುದನ್ನು ರಾಜ್ಯ ಸರ್ಕಾರ ಬಹಳ ಹಿಂದಿನಿಂದಲೂ ಮಾಡುತ್ತಿದೆ.

ಆಯಾ ಕಾಲಕ್ಕೆ ಅನುಗುಣವಾಗಿ ಸ್ವಾತಂತ್ರ್ಯ ಹೋರಾಟಗಾರರಿಗೆ ನೀಡುವ ಗೌರವ ಮಾಸಾಶನವನ್ನು 2018 ರಲ್ಲಿ ಪರಿಷ್ಕೃತಗೊಂಡ ಗೌರವಧನದ ಅನ್ವಯ ಮಾಸಿಕ 10,000 ಗಳನ್ನು ಸ್ವಾತಂತ್ರ್ಯ ಹೋರಾಟಗಾರರಿಗೆ ಮತ್ತು ಅವರ ಅವಲಂಭಿತರಿಗೆ ರಾಜ್ಯ ಸರ್ಕಾರ ನೀಡುತ್ತಿದೆ. ರಾಜ್ಯ ಸರ್ಕಾರ ನೀಡುತ್ತಿರುವ ಗೌರವಧನ 2018ರ ನಂತರ ಇಲ್ಲಿಯವರೆಗೆ ಪರಿಷ್ಕರಣೆ ಆಗಿರುವುದಿಲ್ಲ. ಬಹಳಷ್ಟು ಕಡೆ ಸ್ವಾತಂತ್ರ್ಯ ಹೋರಾಟಗಾರರು ಅಥವಾ ಸ್ವಾತಂತ್ರ್ಯ ಹೋರಾಟಗಾರರ ಅವಲಂಭಿತರು ಮಾಸಾಶನದ ಆಧಾರದ ಮೇಲೆ ತಮ್ಮ ಜೀವನ ನಿರ್ವಹಣೆ ಮಾಡುತ್ತಿದ್ದಾರೆ. ರಾಜ್ಯ ಸರ್ಕಾರವು ದೇಶಕ್ಕೆ ಸ್ವಾತಂತ್ರ್ಯವನ್ನು ತಂದುಕೊಟ್ಟ ಸ್ವಾತಂತ್ರ್ಯ ಹೋರಾಟಗಾರರ ಗೌರವ ಸಮರ್ಪಣೆಯ ಹಿನ್ನೆಲೆಯಲ್ಲಿ ರಾಜ್ಯದಲ್ಲಿರುವ ಕೆಲವೇ ಸ್ವಾತಂತ್ರ್ಯ ಹೋರಾಟಗಾರರಿಗೆ ನೀಡುತ್ತಿರುವ ಗೌರವಧನವನ್ನು ರೂ. 15 ಸಾವಿರ ರೂಪಾಯಿಗಳಿಗೆ ಹೆಚ್ಚಿಸಬೇಕಾಗಿ ವಿನಂತಿ ಮಾಡುತ್ತೇನೆ. ಬದುಕಿನ ಕೊನೆಗಾಲದಲ್ಲಿ ಸ್ವಾತಂತ್ರ್ಯ ಹೋರಾಟಗಾರರನ್ನು ಗೌರವಯುತವಾಗಿ ನಾವು ನಡೆಸಿಕೊಳ್ಳಬೇಕಾಗಿದೆ. ಇಡೀ ರಾಜ್ಯದಲ್ಲಿ ಸುಮಾರು 2000 ಸ್ವಾತಂತ್ರ್ಯ ಹೋರಾಟಗಾರರು ಅಥವಾ ಅವರ ಅವಲಂಬಿತರು ಇದ್ದು, ಬೆಳಗಾವಿ ಜಿಲ್ಲೆಯಲ್ಲಿ ಅತೀ ಹೆಚ್ಚು ಸ್ವಾತಂತ್ರ್ಯ ಹೋರಾಟಗಾರರು ಇರುತ್ತಾರೆ. ಸ್ವಾತಂತ್ರ್ಯ ಹೋರಾಟಗಾರರಿಗೆ ಗೌರವಧನವನ್ನು ಹೆಚ್ಚು ಮಾಡಬೇಕೆಂದು ಪ್ರಜಾವಾಣಿ ಪತ್ರಿಕೆ ಮತ್ತು ಅನೇಕ ಮಾಧ್ಯಮಗಳಲ್ಲಿ ವರದಿಗಳು ಪ್ರಕಟವಾಗಿರುತ್ತದೆ. ಆದುದರಿಂದ ಕರ್ನಾಟಕ ರಾಜ್ಯ ಸರ್ಕಾರವು ಆಡಳಿತ ಮತ್ತು ಸಿಬ್ಬಂದಿ ಇಲಾಖೆಯ ಮುಖಾಂತರವಾಗಿ ಇಡೀ ರಾಜ್ಯದಲ್ಲಿ ಇರುವಂತಹ ಸ್ವಾತಂತ್ರ್ಯ ಹೋರಾಟಗಾರರಿಗೆ ಅಥವಾ ಅವರ ಅವಲಂಭಿತರಿಗೆ ನೀಡುತ್ತಿರುವ ಮಾಸಾಶಾನವನ್ನು ಹೆಚ್ಚು ಮಾಡಬೇಕೆಂದು ಈ ಸದನದ ಮೂಲಕ ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಲು ಬಯಸುತ್ತೇನೆ" .

ಉತ್ತರ

ರಾಜ್ಯ ಸ್ವಾತಂತ್ರ್ಯ ಹೋರಾಟಗಾರರಿಗೆ/ ಸ್ವಾತಂತ್ರ್ಯ ಹೋರಾಟಗಾರರ ಕುಟುಂಬ ಪಿಂಚಣಿದಾರರಿಗೆ ಹಾಲಿ ನೀಡುತ್ತಿರುವ ಸ್ವಾತಂತ್ರ್ಯ ಹೋರಾಟಗಾರರ ರಾಜ್ಯ ಗೌರವಧನವನ್ನು ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 46 ಪಿ.ಎಫ್.ಜಿ 2017 ದಿನಾಂಕ:09.06.2017 ರನ್ವಯ ರೂ.8,000/- ಗಳಿಂದ ರೂ.10,000/-ಗಳಿಗೆ ಹೆಚ್ಚಿಸಿ ಆದೇಶಿಸಲಾಗಿರುತ್ತದೆ.

ರಾಜ್ಯ ಸ್ವಾತಂತ್ರ್ಯ ಹೋರಾಟಗಾರರ ಹಾಗೂ ಗೋವಾ ಚಳುವಳಿಗಾರರ ಪಿಂಚಣಿ ವಿಷಯಗಳು ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ (ಅಸು) 37 ಈಕಾಅ 2021 ದಿನಾಂಕ:13.04.2022 ರನ್ವಯ ಸಿಬ್ಬಂದಿ

ಮತ್ತು ಆಡಳಿತ ಸುಧಾರಣೆ ಇಲಾಖೆಯಿಂದ ಕಂದಾಯ ಇಲಾಖೆಗೆ ವರ್ಗಾವಣೆಯಾಗಿರುತ್ತದೆ. ಮುಂದುವರೆದು ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 67 ಪಿಆರ್‌ಜಿ 2022(1) ದಿನಾಂಕ: 08.02.2023 ರನ್ವಯ ಡಿ.ಬಿ.ಟಿ ಮುಖಾಂತರ ಮಾಸಿಕ ರೂ.10,000/- ರಾಜ್ಯ ಸ್ವಾತಂತ್ರ್ಯ ಹೋರಾಟಗಾರರ ಗೌರವಧನ ಹಾಗೂ ಕುಟುಂಬ ಪಿಂಚಣಿಯನ್ನು ಪಾವತಿಸಲಾಗುತ್ತಿದೆ.

ರಾಜ್ಯ ಸ್ವಾತಂತ್ರ್ಯ ಹೋರಾಟಗಾರರಿಗೆ/ ಸ್ವಾತಂತ್ರ್ಯ ಹೋರಾಟಗಾರರ ಕುಟುಂಬ ಪಿಂಚಣಿದಾರರಿಗೆ ಹಾಲಿ ನೀಡುತ್ತಿರುವ ಸ್ವಾತಂತ್ರ್ಯ ಹೋರಾಟಗಾರರ ರಾಜ್ಯ ಗೌರವಧನ ಮತ್ತು ಕುಟುಂಬ ಪಿಂಚಣಿ ಮೊತ್ತವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

**ಕಡತ ಸಂಖ್ಯೆ: ಕಂಇ 15 ಪಿಎಫ್‌ಜಿ 2026**

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು